**All India Radio: Bangalore**
**National Bulletin In Kannada**
**17.06.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**17.06.2026 1.10 p.m.**

**<><><><>**

ಮುಖ್ಯಾಂಶಗಳು

1. ಜಿ-೭ ಶೃಂಗಸಭೆ ನೇಪಥ್ಯದಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ
2. ದೇಶದ ರಕ್ಷಣಾ ಉತ್ಪಾದನೆ ಸಾರ್ವಕಾಲಿಕ ಗರಿಷ್ಠ ೧ ಲಕ್ಷದ ೭೮ ಸಾವಿರ ಕೋಟಿ ರೂಪಾಯಿಗೆ ಏರಿಕೆ - ರಕ್ಷಣಾ ಸಚಿವ ರಾಜನಾಥ್ ಸಿಂಗ್
3. ಮೊನಾಕೊ ರಾಜಕುಮಾರ ಎರಡನೇ ಆಲ್ಬರ್ಟ್ ಅವರೊಂದಿಗೆ ಕೇಂದ್ರ ಸಚಿವ ಪಿಯೂಷ್ ಗೋಯಲ್ ಮಾತುಕತೆ
4. ಏಕದಿನ ಕ್ರಿಕೆಟ್; ಸರಣಿಯ ಎರಡನೇ ಪಂದ್ಯದಲ್ಲಿ ಇಂದು ಭಾರತ- ಅಫ್ಘಾನಿಸ್ತಾನ ಮುಖಾಮುಖಿ
5. ಫಿಫಾ ವಿಶ್ವಕಪ್ ಫುಟ್‌ಬಾಲ್; ಅಲ್ಜೀರಿಯಾ ವಿರುದ್ಧ ಅರ್ಜೆಂಟಿನಾಗೆ ಗೆಲುವು; ಹ್ಯಾಟ್ರಿಕ್ ಗೋಲು ಗಳಿಸಿದ ಮೆಸ್ಸಿ

<><><><>

ಫ್ರಾನ್ಸ್‌ನಲ್ಲಿ ನಡೆಯುತ್ತಿರುವ ಜಿ-೭ ಶೃಂಗಸಭೆಯ ಸಂದರ್ಭದಲ್ಲಿ ಇಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಆರ್ಥಿಕ ಬೆಳವಣಿಗೆ, ಜಾಗತಿಕ ಸರಬರಾಜು ಸರಪಳಿ, ಕೃತಕ ಬುದ್ಧಿಮತ್ತೆ, ಹೂಡಿಕೆ ಸಹಭಾಗಿತ್ವ ಹಾಗೂ ವಿವಿಧ ಜಾಗತಿಕ ಭದ್ರತಾ ಸವಾಲುಗಳ ಕುರಿತು ಉಭಯ ನಾಯಕರು ಚರ್ಚಿಸುವ ಸಾಧ್ಯತೆ ಇದೆ.

<><><><>

೨೦೨೫-೨೬ನೇ ಹಣಕಾಸು ವರ್ಷದಲ್ಲಿ ಭಾರತದ ವಾರ್ಷಿಕ ರಕ್ಷಣಾ ಉತ್ಪಾದನೆಯು, ಸಾರ್ವಕಾಲಿಕ ಗರಿಷ್ಠ ೧ ಲಕ್ಷದ ೭೮ ಸಾವಿರ ಕೋಟಿ ರೂಪಾಯಿಗೆ ಏರಿಕೆಯಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಸಚಿವರು, ಈ ಸಾಧನೆಯು, ಹಿಂದಿನ ಹಣಕಾಸು ವರ್ಷದ ೧ ಲಕ್ಷದ ೫೪ ಸಾವಿರ ಕೋಟಿ ರೂಪಾಯಿ ಉತ್ಪಾದನೆಗೆ ಹೋಲಿಸಿದರೆ, ಶೇಕಡಾ ೧೫.೭ ರಷ್ಟು ಬೆಳವಣಿಗೆ ಹಾಗೂ ೨೦೨೦-೨೧ನೇ ಹಣಕಾಸು ವರ್ಷದಲ್ಲಿ ೮೪ ಸಾವಿರ ಕೋಟಿ ರೂಪಾಯಿಗೂ ಅಧಿಕವಾಗಿದ್ದ ಉತ್ಪಾದನೆಗೆ ಹೋಲಿಸಿದರೆ, ಶೇಕಡಾ ೧೧೧ರಷ್ಟು ಏರಿಕೆಯನ್ನು ಪ್ರತಿಬಿಂಬಿಸುತ್ತದೆ ಎಂದು ಮಾಹಿತಿ ನೀಡಿದ್ದಾರೆ. ೨೦೧೩-೧೪ನೇ ಹಣಕಾಸು ವರ್ಷದಲ್ಲಿ ೪ ಸಾವಿರ ೭೪೭ ಕೋಟಿ ರೂಪಾಯಿಗಳಷ್ಟಿದ್ದ ಸ್ವದೇಶಿ ರಕ್ಷಣಾ ಉತ್ಪಾದನೆಯು, ಸುಮಾರು ನಾಲ್ಕು ಪಟ್ಟು ಹೆಚ್ಚಾಗಿದೆ ಎಂದು ಅವರು ತಿಳಿಸಿದ್ದಾರೆ. ಇತ್ತೀಚಿನ ವರ್ಷಗಳಲ್ಲಿ ಭಾರತದ ರಕ್ಷಣಾ ಉತ್ಪಾದನೆಯಲ್ಲಿ ಕಂಡುಬಂದಿರುವ ಗಮನಾರ್ಹ ಏರಿಕೆಯು, ರಕ್ಷಣಾ ಉತ್ಪಾದನಾ ಇಲಾಖೆ ಹಾಗೂ ಇತರ ಎಲ್ಲ ಪಾಲುದಾರರ ಸಾಮೂಹಿಕ ಪ್ರಯತ್ನಗಳ ಫಲವಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

<><><><>

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ಮೊನಾಕೋ ರಾಜಕುಮಾರ ಎರಡನೇ ಆಲ್ಬರ್ಟ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿರುವ ಸಚಿವರು, ಭೇಟಿಯ ಸಂದರ್ಭದಲ್ಲಿ ಸುಸ್ಥಿರತೆ, ಕಡಲ ಆರ್ಥಿಕತೆ, ನಾವೀನ್ಯತೆ ಹಾಗೂ ಉದಯೋನ್ಮುಖ ತಂತ್ರಜ್ಞಾನಗಳಂತಹ ಕ್ಷೇತ್ರಗಳಲ್ಲಿ ಭಾರತ-ಮೊನಾಕೋ ಸಹಭಾಗಿತ್ವವನ್ನು ಮತ್ತಷ್ಟು ವಿಸ್ತರಿಸುವ ಕುರಿತು ಚರ್ಚೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ, ಫ್ರಾನ್ಸ್‌ನ ನೀಸ್‌ನಲ್ಲಿ ನಿನ್ನೆ ಸಮಾರೋಪಗೊಂಡ 'ಭಾರತ್ ಇನೋವೇಟ್ಸ್-೨೦೨೬' ಕಾರ್ಯಕ್ರಮದ ಕುರಿತು ರಾಜಕುಮಾರ ಎರಡನೇ ಆಲ್ಬರ್ಟ್‌ಗೆ ಮಾಹಿತಿ ಹಂಚಿಕೊಂಡಿರುವುದಾಗಿ ಅವರು ತಿಳಿಸಿದ್ದಾರೆ. ಭಾರತದ ಚೈತನ್ಯಮಯ ತಂತ್ರಜ್ಞಾನ ಹಾಗೂ ನಾವೀನ್ಯತೆ ಪರಿಸರ ವ್ಯವಸ್ಥೆಯನ್ನು ಜಗತ್ತಿನ ಮುಂದೆ ಪ್ರದರ್ಶಿಸುವುದರ ಜೊತೆಗೆ, ಜಾಗತಿಕ ಸಹಯೋಗವನ್ನು ಬಲಪಡಿಸುವಲ್ಲಿ ಈ ಕಾರ್ಯಕ್ರಮ ಮಹತ್ವದ ಪಾತ್ರ ವಹಿಸಿದೆ ಎಂದು ಪಿಯೂಷ್ ಗೋಯಲ್ ಹೇಳಿದ್ದಾರೆ.

<><><><>

ಭಾರತದ ಕೃಷಿ ರಫ್ತು ದಶಕದ ಹಿಂದೆ ಸುಮಾರು ೨೮೦ ಉತ್ಪನ್ನಗಳಿಂದ ಇಂದು ಸುಮಾರು ೫೦೦ ಉತ್ಪನ್ನಗಳಿಗೆ ವಿಸ್ತರಿಸಿದೆ ಎಂದು ಕೃಷಿ ಮತ್ತು ಸಂಸ್ಕರಿಸಿದ ಆಹಾರ ಉತ್ಪನ್ನಗಳ ರಫ್ತು

ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಭಿಷೇಕ್ ದೇವ್ ಹೇಳಿದ್ದಾರೆ. ಅಮೆರಿಕ, ಬ್ರೆಜಿಲ್, ಚೀನಾ ಮತ್ತು ಐರೋಪ್ಯ ಒಕ್ಕೂಟದಂತಹ ಪ್ರಮುಖ ಜಾಗತಿಕ ರಫ್ತುದಾರರಿಂದ ಸ್ಪರ್ಧೆಯನ್ನು ಎದುರಿಸುತ್ತಿದ್ದರೂ ಸಹ ಕಳೆದ ವರ್ಷ ದೇಶದ ಕೃಷಿ ರಫ್ತು ೫೩ ಶತಕೋಟಿ ಡಾಲರ್‌ಗಳನ್ನು ತಲುಪಿದೆ ಮತ್ತು ವಿಶ್ವದ ಅಗ್ರ ಹತ್ತು ಕೃಷಿ ರಫ್ತು ಮಾಡುವ ದೇಶಗಳಲ್ಲಿ ಸ್ಥಿರವಾಗಿ ಸ್ಥಾನ ಪಡೆದಿದೆ ಎಂದು ಮಾಹಿತಿ ನೀಡಿದರು. ಅಕ್ಕಿ ಮತ್ತು ಮಸಾಲೆಗಳಂತಹ ಸಾಂಪ್ರದಾಯಿಕ ಉತ್ಪನ್ನಗಳನ್ನು ಮೀರಿ ದೇಶವು ತನ್ನ ಕೃಷಿ ರಫ್ತುಗಳನ್ನು ಗಮನಾರ್ಹವಾಗಿ ವೈವಿಧ್ಯಗೊಳಿಸಿದೆ. ಇದರಲ್ಲಿ ದ್ವಿದಳ ಧಾನ್ಯಗಳು, ಕೋಕೋ ಉತ್ಪನ್ನಗಳು, ಅನಾನಸ್, ದ್ರಾಕ್ಷಿ ಮತ್ತು ದಾಳಿಂಬೆ ಸೇರಿವೆ. ಇವುಗಳನ್ನು ಈಗ ಹನ್ನೆರಡಕ್ಕೂ ಹೆಚ್ಚು ದೇಶಗಳ ಮಾರುಕಟ್ಟೆಗಳಿಗೆ ಸಾಗಿಸಲಾಗುತ್ತಿದೆ ಎಂದು ಅಭಿಷೇಕ್ ದೇವ್ ತಿಳಿಸಿದರು.

<><><>

ನೀಟ್ ಪರೀಕ್ಷೆಗೂ ಮುನ್ನ ಪೋಷಕರು ಮತ್ತು ಅಭ್ಯರ್ಥಿಗಳು ವಂಚಕರ ಬಗ್ಗೆ ಎಚ್ಚರದಿಂದಿರಬೇಕು ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ- ಎನ್‌ಟಿಎ ಮನವಿ ಮಾಡಿದೆ. ಟೆಲಿಗ್ರಾಮ್‌ನಲ್ಲಿ ವಂಚಕರು ಮರುಪರೀಕ್ಷಾ ಪತ್ರಿಕೆಯನ್ನು ಹಂಚಿಕೊಳ್ಳುವುದಾಗಿ ಹೇಳಿಕೊಂಡು ೧೪ ಸಾವಿರದಿಂದ ೨೫ ಸಾವಿರ ರೂಪಾಯಿಗಳವರೆಗೆ ಹಣಕ್ಕಾಗಿ ಬೇಡಿಕೆ ಇಡುತ್ತಿದ್ದಾರೆ. ಇದನ್ನು ಪೋಷಕರು ಮತ್ತು ಅಭ್ಯರ್ಥಿಗಳು ನಂಬಿ, ವಂಚನೆಗೆ ಒಳಗಾಗಬಾರದು ಎಂದು ಎನ್‌ಟಿಎ ತಿಳಿಸಿದೆ.

<><><>

ಭಾರತದ ಅಧ್ಯಕ್ಷತೆಯಲ್ಲಿ ಲನೇ ಬ್ರಿಕ್ಸ್ ಮಾದಕವಸ್ತು ವಿರೋಧಿ ಕಾರ್ಯಪಡೆ ಸಭೆ ವರ್ಚುವಲ್ ಮೂಲಕ ನಡೆಯಿತು. ಸಭೆಯಲ್ಲಿ ಭಾರತ, ಚೀನಾ, ಇಥಿಯೋಪಿಯಾ, ಇಂಡೋನೇಷ್ಯಾ, ರಷ್ಯಾ, ದಕ್ಷಿಣ ಆಫ್ರಿಕಾ ಹಾಗೂ ಯುನೈಟೆಡ್ ಅರಬ್ ಎಮಿರೇಟ್ಸ್‌ನ ಪ್ರತಿನಿಧಿಗಳು ಭಾಗವಹಿಸಿದ್ದರು ಎಂದು ಮಾದಕವಸ್ತು ನಿಯಂತ್ರಣ ಬ್ಯೂರೋ-ಎನ್‌ಸಿಬಿ ತಿಳಿಸಿದೆ. ಮಾದಕವಸ್ತು ಕಳ್ಳಸಾಗಣೆ ಮತ್ತು ಮಾದಕವಸ್ತು ದುರ್ಬಳಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಂತಾರಾಷ್ಟ್ರೀಯ ಸಹಕಾರವನ್ನು ಬಲಪಡಿಸುವುದು, ಮಾಹಿತಿ ವಿನಿಮಯವನ್ನು ಹೆಚ್ಚಿಸುವುದು, ಸಾಮರ್ಥ್ಯ ವೃದ್ಧಿ ಹಾಗೂ ಸಮನ್ವಯಿತ ಕಾರ್ಯಾಚರಣೆಗಳನ್ನು ಉತ್ತೇಜಿಸುವ ಬಗ್ಗೆ ಬ್ರಿಕ್ಸ್ ರಾಷ್ಟ್ರಗಳ ಹಂಚಿಕೆಯ ಬದ್ಧತೆಯನ್ನು ಈ ಸಭೆ ಪುನರುಚ್ಚರಿಸಿದೆ ಎಂದು ಎನ್‌ಸಿಬಿ ಹೇಳಿದೆ.

<><><>

ಉತ್ಪಾದನೆ, ಸಂಶೋಧನೆ, ನಾವೀನ್ಯತೆ ಹಾಗೂ ಸಾಮರ್ಥ್ಯ ಅಭಿವೃದ್ಧಿ ಕ್ಷೇತ್ರಗಳಲ್ಲಿ ಸಹಕಾರವನ್ನು ಮತ್ತಷ್ಟು ಗಾಢಗೊಳಿಸಲು ಭಾರತ ಮತ್ತು ಥಾಯ್ಲೆಂಡ್ ಪರಸ್ಪರ ಒಪ್ಪಿಗೆ ಸೂಚಿಸಿವೆ. ಬ್ಯಾಂಕಾಕ್‌ನಲ್ಲಿ ನಡೆದ ೧೦ನೇ ಭಾರತ-ಥಾಯ್ಲೆಂಡ್ ರಕ್ಷಣಾ ಸಂವಾದದಲ್ಲಿ ಈ ಒಪ್ಪಂದಕ್ಕೆ ಬರಲಾಯಿತು. ಸಭೆಯ ಅಧ್ಯಕ್ಷತೆಯನ್ನು ಥಾಯ್ಲೆಂಡ್‌ನ ರಕ್ಷಣಾ ಇಲಾಖೆಯ ಉಪ ಕಾರ್ಯದರ್ಶಿ ಅಡ್ಮಿರಲ್ ನುಟ್ಟಾಪೋಲ್ ಡಿಯೆವಾನಿಚ್ ಹಾಗೂ ಭಾರತದ ಪರವಾಗಿ ರಕ್ಷಣಾ ಸಚಿವಾಲಯದ ಜಂಟಿ ಕಾರ್ಯದರ್ಶಿ ಸತ್ಯಜಿತ್ ಮೊಹಾಂತಿ ವಹಿಸಿದ್ದರು. ಸಭೆಯಲ್ಲಿ ಉಭಯ ದೇಶಗಳ ನಡುವಿನ ರಕ್ಷಣಾ ಸಹಕಾರದ ವಿವಿಧ ಆಯಾಮಗಳನ್ನು ಪರಿಶೀಲಿಸಲಾಯಿತು ಹಾಗೂ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ಭದ್ರತಾ ವಿಷಯಗಳ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಳ್ಳಲಾಯಿತು.

<><><>

ಭಾರತ ಪುರುಷರ ಕ್ರಿಕೆಟ್ ತಂಡ ಇಂದು ಲಕ್ನೋದ ಅಟಲ್ ಬಿಹಾರಿ ವಾಜಪೇಯಿ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಮೂರು ಪಂದ್ಯಗಳ ಸರಣಿಯ ಎರಡನೇ ಏಕದಿನ ಪಂದ್ಯದಲ್ಲಿ ಅಫ್ಘಾನಿಸ್ತಾನವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೧:೩೦ ಕ್ಕೆ ಆರಂಭವಾಗಲಿದೆ. ಶುಭಮನ್ ಗಿಲ್ ನೇತೃತ್ವದ ಭಾರತ ತಂಡ ಪ್ರಸ್ತುತ ಸರಣಿಯಲ್ಲಿ ೧-೦ ಮುನ್ನಡೆಯಲ್ಲಿದೆ ಮತ್ತು ಇಂದಿನ ಪಂದ್ಯದಲ್ಲಿ ಸರಣಿಯನ್ನು ವಶಪಡಿಸಿಕೊಳ್ಳುವ ಗುರಿಯನ್ನು ಹೊಂದಿದೆ.

<><><>

ಅಮೆರಿಕದ ಕಾನ್ಸಸ್ ಸಿಟಿ ಕ್ರೀಡಾಂಗಣದಲ್ಲಿ ಇಂದು ಬೆಳಿಗ್ಗೆ ನಡೆದ ಫಿಫಾ ವಿಶ್ವಕಪ್-೨೦೨೬ರ ಫುಟ್‌ಬಾಲ್ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಅರ್ಜೆಂಟೀನಾ ತಂಡ, ಅಲ್ಜೀರಿಯಾ ವಿರುದ್ಧ ೩-೦ ಗೋಲುಗಳ ಭರ್ಜರಿ ಗೆಲುವು ಸಾಧಿಸಿ, ತನ್ನ ಅಭಿಯಾನ ಆರಂಭಿಸಿದೆ. ಈ ಪಂದ್ಯದಲ್ಲಿ ಹ್ಯಾಟ್ರಿಕ್ ಗೋಲು ಗಳಿಸಿದ ಲಿಯೋನೆಲ್ ಮೆಸ್ಸಿ, ವಿಶ್ವಕಪ್‌ನಲ್ಲಿ ತಮ್ಮ ೧೪ನೇ, ೧೫ನೇ ಹಾಗೂ ೧೬ನೇ ಗೋಲುಗಳನ್ನು ದಾಖಲಿಸುವ ಮೂಲಕ ಇತಿಹಾಸ ನಿರ್ಮಿಸಿದ್ದಾರೆ. ಇದರೊಂದಿಗೆ ವಿಶ್ವಕಪ್ ಇತಿಹಾಸದಲ್ಲಿ ಗರಿಷ್ಠ ೧೬ ಗೋಲುಗಳನ್ನು ದಾಖಲಿಸಿದ ಜರ್ಮನಿಯ ದಿಗ್ಗಜ ಆಟಗಾರ ಮಿರೋಸ್ಲಾವ್ ಕ್ಲೋಸೆಯ ದಾಖಲೆಯನ್ನು ಮೆಸ್ಸಿ ಸರಿಗಟ್ಟಿದ್ದಾರೆ. ಇದಕ್ಕೂ ಮುನ್ನ ಅಮೆರಿಕದ ಬೋಸ್ಟನ್ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ನಾರ್ವೆ ತಂಡವು 'ಐ' ಗುಂಪಿನ ತನ್ನ ಮೊದಲ ಪಂದ್ಯದಲ್ಲಿ ಇರಾಕ್ ವಿರುದ್ಧ ೪-೧ ಗೋಲುಗಳ ಜಯ ಸಾಧಿಸಿದೆ. ಈ ಜಯದೊಂದಿಗೆ ನಾರ್ವೆ

‘ಐ’ ಗುಂಪಿನಲ್ಲಿ ಅಗ್ರಸ್ಥಾನಕ್ಕೇರಿದೆ. ಇನ್ನೊಂದೆಡೆ, ನಿನ್ನೆ ರಾತ್ರಿ ಅಮೆರಿಕದ ನ್ಯೂಜೆರ್ಸಿ ಕ್ರೀಡಾಂಗಣದಲ್ಲಿ ನಡೆದ ‘ಐ’ ಗುಂಪಿನ ಆರಂಭಿಕ ಪಂದ್ಯದಲ್ಲಿ ಫ್ರಾನ್ಸ್ ತಂಡ, ಸೆನೆಗಲ್ ವಿರುದ್ಧ ೩-೧ ಗೋಲುಗಳಿಂದ ಜಯ ಸಾಧಿಸಿತು. ಫ್ರಾನ್ಸ್ ಪರ ಕೈಲಿಯನ್ ಎಂಬಾಪೆ ಎರಡು ಗೋಲುಗಳನ್ನು ಗಳಿಸಿ, ಒಟ್ಟು ೫೮ ಗೋಲುಗಳೊಂದಿಗೆ ಫ್ರಾನ್ಸ್ ತಂಡದ ಸರ್ವಕಾಲಿಕ ಅಗ್ರ ಗೋಲು ಗಳಿಕೆದಾರ ಎಂಬ ಹೆಗ್ಗಳಿಕೆಗೆ ಪಾತ್ರರಾದರು.

<><><>

ಜಮ್ಮು-ಕಾಶ್ಮೀರದಲ್ಲಿ ವಾರ್ಷಿಕ ಅಮರನಾಥ ಯಾತ್ರೆಗೆ ಮುಂಚಿತವಾಗಿ ಕೇಂದ್ರಾಡಳಿತ ಪ್ರದೇಶದಾದ್ಯಂತ ಭದ್ರತೆಯನ್ನು ಬಿಗಿಗೊಳಿಸಲಾಗಿದೆ. ಯಾತ್ರೆ, ಸುಗಮವಾಗಿ ನಡೆಯುವ ನಿಟ್ಟಿನಲ್ಲಿ ಬಹುಪದರದ ಭದ್ರತಾ ವ್ಯವಸ್ಥೆ, ಅಣಕು ಕವಾಯತು ಮತ್ತು ಸಂಘಟಿತ ಕಾರ್ಯಾಚರಣೆ ನಡೆಸಲಾಗುತ್ತಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>